| |
|---|
| Form No.4 (Civil) Deposition Sheets (R.P.No.57) |

# ವಿಶೇಷ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ

## ಸ್ಪೆಷಲ್.ಸಿ. ಸಂಖ್ಯೆ 51/2020

ಪ್ರಾ.ಸಾ. 4 ಚಾ.ಸಾ. 9

| | | |
|---|---|---|
| ಹೆಸರು | : | ಸುರೇಶ |
| ತಂದೆಯ ಹೆಸರು | : | ಚೊಕ್ಲಾನಾಯಕ್ |
| ವಯಸ್ಸು | : | 60 ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸ | : | ಬಸವಂತಪೂರ |

ಪ್ರಮಾಣ ವಚನ ಭೋಧಿಸಿದ ದಿನಾಂಕಃ 09-12-2024
ಮುಖ್ಯ ವಿಚಾರಣೆ ವಿಶೇಷ ಸರಕಾರಿ ಅಭಿಯೋಜಕರಿಂದ

ಚಾಸಾ-1, 6 ರಿಂದ 8 ರವರ ಪರಿಚಯ ಇಲ್ಲ. ಈ ಪ್ರಕರಣದ ಆರೋಪಿತರು ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನೂ ಗೊತ್ತಿರುವುದಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂದಿಸಿದ ಯಾವುದೇ ಜಗಳ ನೊಡಿಲ್ಲ. ನಾನು ಯಾವುದೇ ಜಗಳ ಬಿಡಿಸಲು ಯತ್ನಿಸಿಲ್ಲ. ಚಾಸಾಃ 1 ಮತ್ತು 6 ರವರಿಗೆ ಆರೊಪಿತರಿಂದ ಯಾವುದೇ ತೊಂದರೆಯಾಗಿರುವುದಲ್ಲ. ಈ ಬಗ್ಗೆ ಪೊಲಿಸರಿಗೆ ಯಾವುದೇ ಹೇಳಿಕೆ ಮರು ಹೇಳಿಕೆ ನೀಡಿಲ್ಲ.

( ಈ ಸಾಕ್ಷಿಯು ಈ ಹಿಂದೆ ತನಿಖಾಧಿಕಾರಿಯವರ ಮುಂದೆ ನೀಡಿದ ಹೇಳಿಕೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದರಿಂದ ಪ್ರತಿಕೂಲ ಪಕ್ಷಕಾರರು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅನುಮತಿ ನೀಡಬೇಕೆಂದು ವಿಶೇಷ ಸರಕಾರಿ ಅಭಿಯೋಜಕರು ಭಿನ್ನವಿಸಿರುತ್ತಾರೆ. ಈ ಪ್ರಕರಣದ ಕಾಗದ ಪತ್ರಗಳನ್ನು ಪರಿಶೀಲಿಸಿದಾಗ ಈ ಸಾಕ್ಷಿಯು ತನ್ನ ಹಿಂದಿನ ಹೇಳಿಕೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಪಕ್ಷಕಾರನು ತನ್ನ ಪಾಟೀಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅಭಿಯೋಜನೆಗೆ ಅನುಮತಿ ನೀಡುವುದು ಸೂಕ್ತ ಮತ್ತು ನ್ಯಾಯೋಚಿತ ಎಂದು ಮನಗೊಂಡು ಅನುಮತಿ ನೀಡಲಾಯಿತು. )

ಪಾಟೀ ಸವಾಲು ವಿಶೇಷ ಸರಕಾರಿ ಅಭಿಯೋಜಕರಿಂದ

2. ನಾನು ಮೇಲೆ ನಮೂದಿಸಿದ ಹೆಸರು ಮತ್ತು ವಿಳಾಸದವನಿದ್ದು --------------- ಗುರುತಿಸುತ್ತೇನೆ ಎಂದು ಹೇಳಿ ಗಣಕೀಕರಣ ಮಾಡಿಸಿದ ಹೇಳಿಕೆ ನಿಜ ಇರುತ್ತದೆ ಎಂದು ಈಗ ವಿವರವಾಗಿ ಓದಿ ಹೇಳಿದಂತೆ ದಿಃ 27-11-2019 ರಂದು ಪೊಲೀಸರ ಮುಂದೆ ಹೇಳಿಕೆ ಕೊಟ್ಟಿರುತ್ತೇನೆಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿ.ಪಿ.10 ಎಂದು ಗುರುತಿಸಲಾಯಿತು. ನಿಪಿ 10 ಕ್ಕೆ ಪೂರಕವಾಗಿ ದಿಃ 07-04-2020 ರಂದು ಈಗ ವಿವರವಾಗಿ ಓದಿ ಹೇಳಿದಂತೆ ದಿಃ 27-11-2019 ರಂದು ಪೊಲೀಸರ ಮುಂದೆ ಪುರವಣಿ ಹೇಳಿಕೆ ಕೊಟ್ಟಿರುತ್ತೇನೆಂದರೆ ಸರಿಯಲ್ಲ. ಸದರಿ ಪುರವಣಿ ಹೇಳಿಕೆಯನ್ನು ನಿ.ಪಿ.11 ಎಂದು ಗುರುತಿಸಲಾಯಿತು.

3. ನನಗೆ ಎಲ್ಲಾ ವಿಷಯಗೊತ್ತಿದ್ದರು ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿತರ ಪರವಾಗಿ ಶ್ರೀ. ಎಸ್.ಎಸ್.ಕೆ ವಕೀಲರಿಂದ</u>

-ಇಲ್ಲ.

(ನನ್ನ ಉಕ್ತ ಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿದೆ)
ಓ.ಹೇ.ಕೆ.ಸ. ಇದೆ.

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ಯಾದಗಿರಿ.